ದಿನಾಂಕ 23-01-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ವಾದಿಯ ಪರ ಶ್ರೀ ಎಸ್.ಎಂ.ಎ ವಕೀಲರಿಂದ ಶ್ರೀ ಎಸ್.ವಿ.ಎಂ ವಕೀಲರ ಪರವಾಗಿಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯದಿಂದ ಕೂಡಿದ್ದು, ಪ್ರಮಾಣ ಪತ್ರದಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಹಾವಣಗಿ ಗ್ರಾಮದ ಸ ನಂ: 223/3 ರ ಜಮೀನಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-1 ಎಂದು, ದಿ: 23-07-1966 ರ ನೋಂದಾಯಿತ ವಿಭಾಗ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-2 ಎಂದು, ಸ ನಂ: 223/3 ರ ಜಮೀನಿನ 1967-68 ರಿಂದ 2000-01 ನೇ ಸಾಲಿನ 5 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿ.ಪಿ-3 ರಿಂದ 7 ಎಂದು, ಡ ಸಂ 2475 ರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-8 ಎಂದು, ಆರ್.ಟಿ.ಎಸ್ - ಎ.ಪಿ.ಎಸ್.ಆರ್ ಸಂ: 103/2016-17 ರ ಪ್ರಕರಣದಲ್ಲಿ ಉಪ ವಿಭಾಗಾಧಿಕಾರಿ ಗಳು, ಸವಣೂರು ರವರು ಮಾಡಿದ ಆದೇಶದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-9 ಎಂದು, ಆರ್.ಟಿ.ಎಸ್ - ಎ.ಪಿ.ಎಸ್.ಆರ್ ಸಂ: 104/2016-17 ರ ಪ್ರಕರಣದಲ್ಲಿ ಉಪ ವಿಭಾಗಾಧಿಕಾರಿ ಗಳು, ಸವಣೂರು ರವರು ಮಾಡಿದ ಆದೇಶದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-10 ಎಂದು, ಎಂ ಆರ್ ಸಂ: ಹೆಚ್ -30/2012-13 ರ ಮುಟೇಷನ್ ರಿಜಿಸ್ಟರ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-11 ಎಂದು, ಎಂ ಆರ್ ಸಂ: ಹೆಚ್ -78/2008-09 ರ ಮುಟೇಷನ್ ರಿಜಿಸ್ಟರ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-12 ಎಂದು ಗುರುತಿಸ ಲಾಯಿತು.

**<u>ಪಾಟೀ ಸವಾಲುಃ 1 ಮತ್ತು 2 ನೇ ಪ್ರತಿವಾದಿಗಳ ಪರ ಶ್ರೀ ಎಸ್ ಬಿ ಕೆ  ವಕೀಲರಿಂದಃ</u>**

ಪಾಟೀ ಸವಾಲಿಗೆ ಸಮಯ ಕೋರಿರುತ್ತಾರೆ. ನ್ಯಾಯ ಮತ್ತು ಸಮ್ಮತತೆ ಆಧಾರದ ಮೇರೆಗೆ ಪಾಟೀ ಸವಾಲನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೆ ಸರಿ ಇದೆ  ಎಂದು
ಒಪ್ಪಿರುತ್ತಾರೆ.
Sd/-
ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ
ಹಾನಗಲ್ಲ

ಸಾಕ್ಷಿದಾರರ ಸಹಿ